# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **943** |
| 2 | ಸದಸ್ಯರ ಹೆಸರು | : | **ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| 3 | ಉತ್ತರಿಸುವ ದಿನಾಂಕ | : | **24.02.2022** |
| 4 | ಉತ್ತರಿಸುವ ಸಚಿವರು | : | **ಗೃಹ ಸಚಿವರು** |

| ಪ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಜಿಲ್ಲಾ ವರಿಷ್ಠಾಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 201 ಹುದ್ದೆಗಳು ಮತ್ತು ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 125 ಹುದ್ದೆಗಳು ಖಾಲಿ ಇರುತ್ತವೆ. ಹುದ್ದೆಗಳ ವಿವರವನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |
| ಆ | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಇದುವರೆವಿಗೂ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೆಳಕಂಡಂತೆ ಕ್ರಮ ವಹಿಸಲಾಗುತ್ತಿದೆ.<br>1) ಪ್ರಸ್ತುತ ರಿಕ್ತವಿರುವ ಪಿಎಸ್ಐ ಹುದ್ದೆಗಳಿಗೆ ನೇಮಕಾತಿ ಸಂಬಂಧಿಸಿದಂತೆ ಈಗಾಗಲೇ ನೇಮಕಾತಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿರುತ್ತದೆ.<br>2) ಎ.ಆರ್.ಎಸ್.ಐ/ಎ.ಎಸ್.ಐ/ಎ.ಹೆಚ್.ಸಿ/ಸಿ.ಹೆಚ್.ಸಿ. ಹುದ್ದೆಗಳಲ್ಲಿ ಅರ್ಹ ಸಿಬ್ಬಂದಿಗಳಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br>3) ಸಿ.ಪಿ.ಸಿ ಮತ್ತು ಎ.ಪಿ.ಸಿ ಹುದ್ದೆಗಳಲ್ಲಿ, ಸಿಪಿಸಿ ಹುದ್ದೆಗೆ ಈಗಾಗಲೇ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಆಯ್ಕೆ ಪಟ್ಟಿ ಪ್ರಕಟಿಸಲಾಗುತ್ತದೆ. ಎ.ಪಿ.ಸಿ ಹುದ್ದೆಗೆ 2021-2022ನೇ ಸಾಲಿನ ಅಧಿಸೂಚನೆ ಹೊರಡಿಸಲು ಈಗಾಗಲೇ ಅನುಮತಿಸಲಾಗಿದೆ. 2022-23ನೇ ಸಾಲಿನಲ್ಲಿ ಅಧಿಸೂಚನೆ ಹೊರಡಿಸಲಾಗುತ್ತದೆ. |
| ಇ | ಮೇಲ್ಕಂಡ ಜಿಲ್ಲೆಗಳಲ್ಲಿ ಪಿ.ಎಸ್.ಐ. ಹುದ್ದೆಗಳ ನೇಮಕಾತಿ ಸಂದರ್ಭದಲ್ಲಿ ಸಂವಿಧಾನದ 371(ಜೆ) ಕಲಂ ಉಲ್ಲಂಘನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು? | ಪೊಲೀಸ್ ಇಲಾಖೆಯ 545 ಪಿ.ಎಸ್.ಐ ಹುದ್ದೆಗಳ ನೇಮಕಾತಿ ಸಂಬಂಧಿಸಿದಂತೆ ದಿನಾಂಕ: 19.01.2022 ರಂದು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಕಲ್ಯಾಣ ಕರ್ನಾಟಕ ಪ್ರದೇಶದ ಕೆಲವು ಅಭ್ಯರ್ಥಿಗಳು ಹಾಗೂ ಇತರರಿಂದ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ / ಮನವಿಗಳು ಸ್ವೀಕೃತವಾದ ಹಿನ್ನಲೆಯಲ್ಲಿ 545 ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪರಿಶೀಲಿಸಲು ಸರ್ಕಾರದ ಆದೇಶ ಸಂಖ್ಯೆ: ಒಇ 21 ಪಿಇಐ 2022, ದಿನಾಂಕ: 15.02.2022ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು 545 ಪಿ.ಎಸ್.ಐ ಹುದ್ದೆಯ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿಆಸು ಇಲಾಖೆಯು ಕಾಲಕಾಲಕ್ಕೆ ಹೊರಡಿಸಿರುವ ಸುತ್ತೋಲೆಗಳನ್ವಯ ಪರಿಶೀಲಿಸಿ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲಾಗಿದೆಯೇ? ಎಂಬ ಬಗ್ಗೆ ವರದಿ ಸಲ್ಲಿಸಲು ಸೂಚಿಸಲಾಗಿತ್ತು. ಸದರಿ ಸಮಿತಿಯ ವರದಿ ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿ ಇರುತ್ತದೆ. |

ಸಂಖ್ಯೆ: ಒಇ 53 ಪಿಇಜಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು

# ಅನುಬಂಧ

## ಯಾದಗಿರಿ ಜಿಲ್ಲೆ

| ಕ್ರಮ ಸಂಖ್ಯೆ | ಹುದ್ದೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| 01 | ಪಿ.ಎಸ್.ಐ | 03 |
| 02 | ಎ.ಆರ್.ಎಸ್.ಐ | 05 |
| 03 | ಸಿ.ಹೆಚ್.ಸಿ | 04 |
| 04 | ಎ.ಹಚ್.ಸಿ | 02 |
| 05 | ಸಿ.ಪಿ.ಸಿ | 66 |
| 06 | ಎ.ಪಿ.ಸಿ | 40 |
| 07 | ಶೀಘ್ರಲಿಪಿಗಾರರು | 01 |
| 08 | ದ್ವಿ.ದ.ಸ | 03 |
| 09 | ಬೆರಳಚ್ಚುಗಾರರು | 01 |
| | **ಒಟ್ಟು** | **125** |

## ಕಲಬುರಗಿ ಜಿಲ್ಲೆ

| ಕ್ರಮ ಸಂಖ್ಯೆ | ಹುದ್ದೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| 01 | ಪಿ.ಎಸ್.ಐ | 15 |
| 02 | ಎ.ಎಸ್.ಐ | 02 |
| 03 | ಎ.ಆರ್.ಎಸ್.ಐ | 06 |
| 04 | ಸಿ.ಹೆಚ್.ಸಿ | 17 |
| 05 | ಎ.ಹಚ್.ಸಿ | 21 |
| 06 | ಸಿ.ಪಿ.ಸಿ | 70 |
| 07 | ಎ.ಪಿ.ಸಿ | 67 |
| 08 | ಶೀಘ್ರಲಿಪಿಗಾರರು | 1 |
| 09 | ಬೆರಳಚ್ಚುಗಾರರು | 02 |
| | **ಒಟ್ಟು** | **201** |